## ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಯಚೂರು

## ಸತ್ರ ಮೊಕದ್ದಮೆ ಸಂಖ್ಯೆ 71/2022

ಚಾ.ಸಾಃ 09 ಪ್ರಾ.ಸಾಃ 14

ಸಾಕ್ಷಿಯನ್ನು ಪ್ರಮಾಣೀಕರಿಸಿದ ದಿನಾಂಕ 05.01.2026

| | | |
|---|---|---|
| ಸಾಕ್ಷಿಯ ಹೆಸರು | : | ರಂಗನಾಥ |
| ತಂದೆಯ ಹೆಸರು | : | ನಾಗರಾಜ |
| ವಯಸ್ಸು | : | 24 ವರ್ಷ |
| ಉದ್ಯೋಗ | : | ಕೂಲಿ |
| ವಿಳಾಸ | : | ರಾಯಚೂರು |

**ಮುಖ್ಯ ವಿಚಾರಣೆಃ ಮಾನ್ಯ ಸರಕಾರಿ ಅಭಿಯೋಜಕರಿಂದಃ**

ನ್ಯಾಯಾಲಯದಲ್ಲಿರುವ ಆರೋಪಿತರು ನನಗೆ ಗೊತ್ತಿಲ್ಲ. ಬಿ.ಡಿ.ಡಿ.ಎಸ್ ಬೆಂಗಳೂರು ಇವರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ ಮತ್ತು ಪೋಲಿಸರು ಮಹಜರ ಮಾಡಿಲ್ಲ. ಈಗ ತೋರಿಸಿದ ಮಹಜರದಲ್ಲಿ ನನ್ನ ಸಹಿ ಇದೆ. ಸಾಕ್ಷಿಯು ಗುರುತಿಸಿದ ಮಹಜರನ್ನು ಈಗಾಗಲೇ ನಿಪಿ.23 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು **ನಿಪಿ.23(ಸಿ)** ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ.23(ಬಿ) ಪೋಟೋ ನೋಡಿ ಗುರುತಿಸಿರುತ್ತಾರೆ. ಸದರಿ ಪೋಟೋವನ್ನು ಯಾವ ಕಾರಣಕ್ಕಾಗಿ ತೆಗೆದಿದ್ದಾರೆಂದು ಗೊತ್ತಿಲ್ಲ. ನಿಪಿ.23 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲು ಅನುಮತಿಸಲಾಯಿತು)

**ಮಾನ್ಯ ಸರಕಾರಿ ಅಭಿಯೋಜಕರಿಂದ ಪಾಟೀ ಸವಾಲುಃ-**

02. ದಿನಾಂಕ 09.04.2021 ರಂದು ಚಾಸಾ-31 ರವರು ಗುರುತಿಸಿ ಸಂಗ್ರಹಿಸಿ ಕೊಟ್ಟ ಮಹಜರದಲ್ಲಿ ನಮೂದಿಸಿದ ಈಗ ಓದಿ ಹೇಳಿದ ಐದು ವಸ್ತುಗಳನ್ನು ನನ್ನ ಮತ್ತು ಚಾಸಾ-8 ರವರ ಸಮಕ್ಷಮ ಗುನ್ನೆ ಸ್ಥಳದಲ್ಲಿ ತನಿಖಾಧಿಕಾರಿ ಮಹಜರ ಮೂಲಕ ವಶಪಡಿಸಿಕೊಂಡರು ಎನ್ನುವುದು ಸರಿಯಲ್ಲ. ಸ್ಥಳದಲ್ಲಿ ಪೋಲಿಸರು ನಿಪಿ.23 ರ ಪ್ರಕಾರ ಮಹಜರ ಮಾಡಿದರು ಎನ್ನುವುದು ಸುಳ್ಳು. ಸ್ಥಳದಲ್ಲಿ ಪೋಲಿಸರು ಪೋಟೋ ತೆಗೆದರು ಎನ್ನುವುದು ಸುಳ್ಳು.

03. ಸ್ಥಳದಲ್ಲಿ ಮಹಜರ ಮಾಡಿದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೆನೆ ಎನ್ನುವುದು ಸರಿಯಲ್ಲ.

(ಆರೋಪಿತರ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.)

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ.ಇದೆ.

**(ಹತ್ತಿಕಾಳ ಪ್ರಭು ಸಿದ್ದಪ್ಪ)**
ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ರಾಯಚೂರು.